# ಮಂಗಳೂರು ವಿಶ್ವವಿದ್ಯಾನಿಲಯ
# ಕನಕದಾಸ ಅಧ್ಯಯನ ಪೀಠ
# ಕನಕದಾಸ ಸಂಶೋಧನ ಕೇಂದ್ರ

ಮಂಗಳಗಂಗೋತ್ರಿ – ೫೭೪೧೯೯

**ಸಹಯೋಗ : ಸಮಾಜಕಾರ್ಯ ಅಧ್ಯಯನ ವಿಭಾಗ ಮಂಗಳೂರು ವಿಶ್ವವಿದ್ಯಾನಿಲಯ**

## ‘ಕನಕ ಕೀರ್ತನ ಗಂಗೋತ್ರಿ’

**ಶೈಕ್ಷಣಿಕ ಸಂಸ್ಥೆಗಳ ಹಾಗೂ ಸಾರ್ವಜನಿಕರ ಸಾಮುದಾಯಿಕ ಪಾಲ್ಗೊಳ್ಳುವಿಕೆಯ ಕನಕದಾಸರ ಕೀರ್ತನೆಗಳ ಗಾಯನ ಮತ್ತು ಸಮೂಹ ಗಾಯನ ಕಾರ್ಯಕ್ರಮ**

---

**ದಿನಾಂಕ : 02.02.2024ರಂದು ಶುಕ್ರವಾರ ಪೂರ್ವಾಹ್ನ 10.00 ಗಂಟೆಗೆ**

**ಸ್ಥಳ : ಮಂಗಳ ಸಭಾಂಗಣ, ಮಂಗಳೂರು ವಿಶ್ವವಿದ್ಯಾನಿಲಯ**

---

ಅಧ್ಯಕ್ಷತೆ

**ಪ್ರೊ. ಜಯರಾಜ್ ಅಮೀನ್**

ಕುಲಪತಿಗಳು

ಮಂಗಳೂರು ವಿಶ್ವವಿದ್ಯಾನಿಲಯ

ಉದ್ಘಾಟನೆ

**ಪ್ರೊ. ವಿ. ಅರವಿಂದ ಹೆಬ್ಬಾರ್**

ವಿಶ್ರಾಂತ ಸಸ್ಯಶಾಸ್ತ್ರ ಪ್ರಾಧ್ಯಾಪಕರು ಮತ್ತು ಅಧ್ಯಕ್ಷರು

ರಂಜನಿ ಮೆಮೋರಿಯಲ್ ಟ್ರಸ್ಟ್, ಉಡುಪಿ

ಗೌರವ ಉಪಸ್ಥಿತಿ

**ಡಾ. ಮೋಹನ್ ಎಸ್. ಸಿಂಘೆ**

ಅಧ್ಯಕ್ಷರು

ಸಮಾಜಕಾರ್ಯ ಅಧ್ಯಯನ ವಿಭಾಗ

ಮಂಗಳೂರು ವಿಶ್ವವಿದ್ಯಾನಿಲಯ

**ಡಾ. ಸೋಮಣ್ಣ ಹೊಂಗಳ್ಳಿ**

ಅಧ್ಯಕ್ಷರು

ಎಸ್.ವಿ.ಪಿ. ಕನ್ನಡ ಅಧ್ಯಯನ ಸಂಸ್ಥೆ

ಮಂಗಳೂರು ವಿಶ್ವವಿದ್ಯಾನಿಲಯ

### ತಮಗೆಲ್ಲರಿಗೂ ಆದರದ ಸ್ವಾಗತ

**ಡಾ. ಧನಂಜಯ ಕುಂಬ್ಳೆ**
ಸಂಯೋಜಕರು, ಕನಕದಾಸ ಸಂಶೋಧನ ಕೇಂದ್ರ

**ಶ್ರೀ ರಾಜು ಕೆ.** ಕೆಎಎಸ್
ಕುಲಸಚಿವರು, ಮಂಗಳೂರು ವಿಶ್ವವಿದ್ಯಾನಿಲಯ

ಮಂಗಳೂರು ತಾಲೂಕು ವ್ಯಾಪ್ತಿಯ ಉಳ್ಳಾಲ, ಮಂಗಳೂರು, ಬಂಟ್ವಾಳ, ಮೂಲ್ಕಿ ಹಾಗು ಗಡಿನಾಡು ಪ್ರದೇಶವಾದ ಮಂಜೇಶ್ವರ, ಕಾಸರಗೋಡು ತಾಲೂಕು ವ್ಯಾಪ್ತಿಯ ಪ್ರೌಢಶಾಲೆ, ಪದವಿಪೂರ್ವ ಕಾಲೇಜುಗಳು ಮತ್ತು ಮಂಗಳೂರು ವಿಶ್ವವಿದ್ಯಾನಿಲಯ ವ್ಯಾಪ್ತಿಯ ಕಾಲೇಜುಗಳು, ದಕ್ಷಿಣ ಕನ್ನಡ ಜಿಲ್ಲೆಯ ವಿಶ್ವೇಶ್ವರಯ್ಯ ತಾಂತ್ರಿಕ ಹಾಗೂ ರಾಜೀವ್ ಗಾಂಧಿ ವೈದ್ಯಕೀಯ ವಿಶ್ವವಿದ್ಯಾನಿಲಯ, ಕಣ್ಣೂರು ವಿಶ್ವವಿದ್ಯಾನಿಲಯ, ಕೇಂದ್ರೀಯ ವಿಶ್ವವಿದ್ಯಾನಿಲಯ ಕಾಸರಗೋಡು ಇಲ್ಲಿನ ಪದವಿ ಮತ್ತು ಸ್ನಾತಕೋತ್ತರ ವಿಭಾಗಗಳ ವಿದ್ಯಾರ್ಥಿಗಳು, ಸಿಬ್ಬಂದಿಗಳು ಹಾಗು ದಕ್ಷಿಣ ಕನ್ನಡ ಜಿಲ್ಲಾ ವ್ಯಾಪ್ತಿಯ ಸಾರ್ವಜನಿಕರು ಸಾಮುದಾಯಿಕ ಪಾಲ್ಗೊಳ್ಳುವಿಕೆಯ ಕಾರ್ಯಕ್ರಮ.

**ಕನಕದಾಸ ಅಧ್ಯಯನ ಪೀಠ ಮತ್ತು ಕನಕದಾಸ ಸಂಶೋಧನ ಕೇಂದ್ರ**

ಕವಿಯಾಗಿ, ದಾರ್ಶನಿಕರಾಗಿ ಮತ್ತು ಸಾಮಾಜಿಕ ಚಿಂತಕರಾಗಿ ಸಮಕಾಲೀನ ಕರ್ನಾಟಕದ ಚರಿತ್ರೆಯಲ್ಲಿ ಕನಕದಾಸರದು ಮಹತ್ವಪೂರ್ಣ ಹೆಸರು. ಅವರ ಬದುಕು ಮತ್ತು ಬರೆಹಗಳ ಅಧ್ಯಯನ ಮತ್ತು ಪ್ರಸರಣದ ಉದ್ದೇಶದಿಂದ ಕರ್ನಾಟಕ ಸರಕಾರ 2003ರಲ್ಲಿ ಕನಕದಾಸ ಅಧ್ಯಯನ ಪೀಠ ಹಾಗೂ 2008ರಲ್ಲಿ ಕನಕದಾಸ ಸಂಶೋಧನ ಕೇಂದ್ರವನ್ನು ಸ್ಥಾಪಿಸಿದೆ. ಕಳೆದ ಇಪ್ಪತ್ತೊಂದು ವರ್ಷಗಳಿಂದೀಚೆಗೆ ಕನಕದಾಸ ಅಧ್ಯಯನ ಪೀಠ ಮತ್ತು ಕನಕದಾಸ ಸಂಶೋಧನ ಕೇಂದ್ರ ಕನಕದಾಸರು ಪ್ರತಿನಿಧಿಸುತ್ತಿದ್ದ ಸಾಮಾಜಿಕ ಚಿಂತನೆ ಮತ್ತು ಕಾಳಜಿಗಳನ್ನು ಪಸರಿಸುವ ಮತ್ತು ಜನಪ್ರಿಯಗೊಳಿಸುವ ವೈವಿಧ್ಯಮಯವಾಗಿರುವ ಹಲವಾರು ಚಟುವಟಿಕೆಗಳನ್ನು ನಡೆಸಿಕೊಂಡು ಬರುತ್ತಿದೆ.

ಕನಕದಾಸರ ತತ್ತ್ವಚಿಂತನೆಗಳನ್ನು ಯುವ ಸಮುದಾಯಕ್ಕೆ ತಲುಪಿಸುವ ಆಶಯದಲ್ಲಿ 'ಕನಕ ಚಿಂತನ' ಪ್ರಚಾರೋಪನ್ಯಾಸ ಕಾರ್ಯಕ್ರಮವನ್ನು ಹಮ್ಮಿಕೊಂಡು ಬರುತ್ತಿದೆ. ಈವರೆಗೆ ಒಟ್ಟು 240 ಪ್ರಚಾರೋಪನ್ಯಾಸಗಳನ್ನು ರಾಜ್ಯ ಮತ್ತು ದೇಶದ ವಿವಿಧೆಡೆ ನೆರವೇರಿಸಿದೆ. ಇದರೊಂದಿಗೆ ಕನಕ ಸಾಹಿತ್ಯ ಸಮ್ಮೇಳನ, 5 ರಾಷ್ಟ್ರೀಯ, 2 ಅಂತಾರಾಷ್ಟ್ರೀಯ ವಿಚಾರ ಸಂಕಿರಣಗಳನ್ನು ಏರ್ಪಡಿಸಿದೆ. ಸಂಶೋಧನ ಕೇಂದ್ರವು ಒಟ್ಟು 7 ಕೃತಿಗಳನ್ನು, ಒಂದು ಧ್ವನಿಸುರುಳಿಯನ್ನು ಪ್ರಕಟಿಸಿದ್ದು, ಇವುಗಳ ಮಾರಾಟದ ವ್ಯವಸ್ಥೆಯನ್ನು ಕೂಡಾ ಕೇಂದ್ರವು ಮಾಡುತ್ತಿದೆ. ಇದಲ್ಲದೇ 'ಕನಕ ಸ್ಮೃತಿ' ವಿಶೇಷ ಉಪನ್ಯಾಸ ಕಾರ್ಯಕ್ರಮ, ಕನಕ ಜಯಂತಿ, ಕನಕ ಕೀರ್ತನ ವ್ಯಾಖ್ಯಾನ–ಅರ್ಥಾನುಸಂಧಾನ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಿರಂತರ ಏರ್ಪಡಿಸುತ್ತಾ ಬರುತ್ತಿದೆ.

**ಕನಕ ಕೀರ್ತನ ಗಂಗೋತ್ರಿ**

ಕನಕದಾಸರ ತತ್ವಪದಗಳನ್ನು ವಿದ್ಯಾರ್ಥಿ ಸಮುದಾಯಕ್ಕೆ ಪ್ರಚಾರಪಡಿಸುವ ನಿಟ್ಟಿನಲ್ಲಿ, ಸಾಮುದಾಯಿಕ ಪಾಲ್ಗೊಳ್ಳುವುದಕ್ಕೆ ಅವಕಾಶವನ್ನು ಕಲ್ಪಿಸುವ 'ಕನಕ ಕೀರ್ತನ ಗಂಗೋತ್ರಿ' ಎಂಬ ಕನಕದಾಸರ ಕೀರ್ತನೆಗಳ ಗಾಯನ ಕಾರ್ಯಕ್ರಮವನ್ನು ಪ್ರೌಢಶಾಲೆ, ಪದವಿಪೂರ್ವ, ಪದವಿ, ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳು, ಅಧ್ಯಾಪಕ, ಅಧ್ಯಾಪಕೇತರ ಮತ್ತು ಕನಕದಾಸರ ಕೀರ್ತನೆಗಳ ಸಮೂಹ ಗಾಯನ ಸಾರ್ವಜನಿಕ ಮಟ್ಟದಲ್ಲಿ ವಿಶ್ವವಿದ್ಯಾನಿಲಯ ಹಾಗೂ ಅವುಗಳ ಸಂಯೋಜಿತ ಕಾಲೇಜು ಹಾಗೂ ಇತರ ಸಾರ್ವಜನಿಕ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ ನಡೆಸಿಕೊಂಡು ಬರುತ್ತಿದೆ. ಈ ಕಾರ್ಯಕ್ರಮದ ಕೀರ್ತನ ಗಾಯನದಲ್ಲಿ ಪ್ರತೀ ವಿಭಾಗದಿಂದ ಆಯ್ಕೆಯಾದ ಮೂರು ಮಂದಿ ಅಭ್ಯರ್ಥಿಗಳಿಗೆ ಮತ್ತು ಸಮೂಹ ಗಾಯನದಲ್ಲಿ ಆಯ್ಕೆಯಾದ ಮೂರು ತಂಡಕ್ಕೆ ಮಂಗಳೂರು ವಿಶ್ವವಿದ್ಯಾನಿಲಯದ ಮಂಗಳಗಂಗೋತ್ರಿಯಲ್ಲಿ ನಡೆಯುವ 'ಕನಕ ಸ್ಮೃತಿ' ಎಂಬ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ನಗದು, ಕನಕ ಪುರಸ್ಕಾರ, ಪ್ರಮಾಣ ಪತ್ರಗಳನ್ನು ನೀಡಿ ಗೌರವಿಸಲಾಗುತ್ತದೆ.

ಈ ಗಾಯನ ಕಾರ್ಯಕ್ರಮದಲ್ಲಿ ಭಾಗವಹಿಸಲಿಚ್ಛಿಸುವವರು ಸಂಪರ್ಕಿಸಬಹುದಾದ ದೂರವಾಣಿ ಸಂಖ್ಯೆ : 8310300875

ಇಮೇಲ್: kanakadasaresearchcenter2008@gmail.com